**ಪ್ರಕಟಣೆ**

***ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ***

| | |
|---|---|
| • **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:** | **31.12.2022** |
| • **ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ:** | https://ssp.karnataka.gov.in/ |
| • **ಅರ್ಹತೆ:** | **ಒಂದನೇ ತರಗತಿಯಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹವಿರುತ್ತಾರೆ.** |

**ವಿದ್ಯಾರ್ಥಿ ವೇತನ ಸೌಲಭ್ಯದ ವಿವರ**

**(A) ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿವೇತನ : (ರೂ.ಗಳಲ್ಲಿ)**

| ತರಗತಿ | ಬಾಲಕ/ಬಾಲಕಿ (10 ತಿಂಗಳಿಗೆ) | ಒಟ್ಟು |
|---|---|---|
| ತರಗತಿ 1 ರಿಂದ 10 | 2000/– | 2000 /– |

**(B) ರಾಜ್ಯ ವಿದ್ಯಾರ್ಥಿ ವೇತನ ದರಗಳು : (ರೂ.ಗಳಲ್ಲಿ)**

| ತರಗತಿ | ಬಾಲಕ/ಬಾಲಕಿ (10 ತಿಂಗಳಿಗೆ) | ಅಡ್‌ಹಾಕ್ ಗ್ರಾಂಟ್ | ಒಟ್ಟು |
|---|---|---|---|
| ತರಗತಿ 1 ರಿಂದ 5 | 250/- | 500/- | 750/- |
| ತರಗತಿ 6 ರಿಂದ 8 | 400/- | 500/- | 900/- |
| ತರಗತಿ 9 ರಿಂದ 10 | 500/- | 500/- | 1000/- |

**ಅರ್ಜಿ ಸಲ್ಲಿಸಲು ಅಗತ್ಯವಿರುವ ಮಾಹಿತಿ/ದಾಖಲೆ**

- ✓ ಶಾಲೆಯಲ್ಲಿ ಪ್ರವೇಶ ಪಡೆದಿರುವ ಬಗ್ಗೆ ಸ್ಯಾಟ್ಸ್–ಐಡಿ (SATS-ID) (ಸ್ಯಾಟ್ಸ್–ಐಡಿ ತಿಳಿಯಲು ವೆಬ್ ವಿಳಾಸ: http://sts.karnataka.gov.in)
- ✓ ವಿದ್ಯಾರ್ಥಿಯ ಆಧಾರ್ ಸಂಖ್ಯೆ
- ✓ ಪೋಷಕರ ಆಧಾರ್ ಸಂಖ್ಯೆ
- ✓ ಜಾತಿ ಪ್ರಮಾಣ ಪತ್ರದ ಆರ್.ಡಿ. ಸಂಖ್ಯೆ
- ✓ ಆದಾಯ ಪ್ರಮಾಣ ಪತ್ರದ ಆರ್.ಡಿ. ಸಂಖ್ಯೆ
- ✓ ಸರ್ಕಾರಿ ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ ಪಡೆದಿದ್ದಲ್ಲಿ, ವಿದ್ಯಾರ್ಥಿ ನಿಲಯ ಪ್ರವೇಶ ಸಂಖ್ಯೆ (ಸಂಬಂಧಿಸಿದ ಇಲಾಖೆಯಿಂದ ಪಡೆದಿದ್ದು)
- ✓ ಹಿಂದಿನ ಸಾಲಿನಲ್ಲಿ ವಿದ್ಯಾರ್ಥಿ ವೇತನ ಪಡೆದಿದ್ದಲ್ಲಿ ಹಿಂದಿನ ಸಾಲಿನ ಅರ್ಜಿ ಸಂಖ್ಯೆ (ಸಂಬಂಧಿಸಿದ ಇಲಾಖೆಯಿಂದ ಪಡೆದಿದ್ದು)
- ✓ ಆಧಾರ್ ಸಂಖ್ಯೆ ಇಲ್ಲದಿದ್ದಲ್ಲಿ, ಆಧಾರ್ ನೋಂದಣಿ ಮಾಡಿಸಿದ ಇ.ಐ.ಡಿ ಸಂಖ್ಯೆ, ಬ್ಯಾಂಕ್ ಖಾತೆ ಸಂಖ್ಯೆ, ಐ.ಎಫ್.ಎಸ್.ಸಿ ಸಂಖ್ಯೆ, ಬ್ಯಾಂಕಿನ ವಿಳಾಸ
- ✓ ಪೋಷಕರ ಆಧಾರ್ ನಂಬರ್‌ಗೆ ಲಿಂಕ್ ಮಾಡಿರುವ ಮೊಬೈಲ್ ನಂ ಹಾಗೂ ಭೌತಿಕ ಅನುಮತಿ ಪತ್ರ

**ಅರ್ಜಿ ಸಲ್ಲಿಸಲು ಬೇಕಾದ ಅರ್ಹತೆಗಳು:**

1. **ಕುಟುಂಬದ ವಾರ್ಷಿಕ ಆದಾಯ ಮಿತಿ :**
   - ➢ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿವೇತನ: ರೂ. 2.50 ಲಕ್ಷ /ವಾರ್ಷಿಕ.
   - ➢ ರಾಜ್ಯ ಸರ್ಕಾರದ ವಿದ್ಯಾರ್ಥಿ ವೇತನ: ರೂ. 1.00 ಲಕ್ಷ/ವಾರ್ಷಿಕ ಪ್ರವರ್ಗ–1ರ ವಿದ್ಯಾರ್ಥಿಗಳಿಗೆ ಮಾತ್ರ<br>ರೂ. 44,500/– ವಾರ್ಷಿಕ ಪ್ರವರ್ಗ–2ಎ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳಿಗೆ
2. **ಫಲಾನುಭವಿಯ ಜಾತಿ :**
   - ➢ ರಾಜ್ಯ ಸರ್ಕಾರವು ಅಧಿಸೂಚಿಸಿರುವ ಪ್ರವರ್ಗ–1, 2ಎ, 3ಎ ಮತ್ತು 3ಬಿ ಹಾಗೂ ಕೇಂದ್ರ ಸರ್ಕಾರವು ಅಧಿಸೂಚಿಸಿರುವ ಇತರೆ ಹಿಂದುಳಿದ ವರ್ಗಗಳಡಿ ಬರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸೌಲಭ್ಯಕ್ಕೆ ಅರ್ಹರಾಗುವುದಿಲ್ಲ.
3. **ಆದಾಯ ಮತ್ತು ಮೆರಿಟ್ ಆಧಾರದಲ್ಲಿ ಮಂಜೂರಾತಿ :**
   - ➢ ಪ್ರವರ್ಗ–1 ಮತ್ತು ಅಲೆಮಾರಿ/ಅರೆಅಲೆಮಾರಿ ಜನಾಂಗಗಳಿಗೆ ಸೇರಿದ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುವುದು.
   - ➢ ತದ ನಂತರ ಇನ್ನುಳಿದ ವಿದ್ಯಾರ್ಥಿಗಳಿಗೆ ಆದಾಯ ಮತ್ತು ಮೆರಿಟ್ ಆಧಾರದ ಮೇಲೆ ರಾಜ್ಯ ವಿದ್ಯಾರ್ಥಿ ವೇತನ ಮಂಜೂರು ಮಾಡಲಾಗುವುದು.

**ಹೆಚ್ಚಿನ ವಿವರಗಳಿಗೆ ಸಂಪರ್ಕಿಸಿ:** ಸಂಬಂಧಪಟ್ಟ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ /ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ/ https://bcwd.karnataka.gov.in/

ದೂರವಾಣಿ ಸಂಖ್ಯೆ:8050770005

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.